**All India Radio: Bangalore**
**National Bulletin In Kannada**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**14.08.2026 19.35 pm**

**<>><><*><><<>**

ಮುಖ್ಯಾಂಶಗಳು

**೧. ಜಾಗತಿಕ ಅಸ್ಥಿರತೆ ನಡುವೆಯೂ ಬಲಾಢ್ಯ ಆರ್ಥಿಕತೆಯಾಗಿ ಹೊರಹೊಮ್ಮಿದ ಭಾರತ - ರಾಷ್ಟ್ರಪತಿ ದ್ರೌಪದಿ ಮುರ್ಮು**

**೨. ಎಂಬತ್ತನೇ ಸ್ವಾತಂತ್ರ್ಯ ದಿನಾಚರಣೆಗೆ ದೇಶ ಸಜ್ಜು; ಕೆಂಪುಕೋಟೆಯಲ್ಲಿ ನಾಳೆ ಪ್ರಧಾನಿ ನರೇಂದ್ರ ಮೋದಿ ಅವರಿಂದ ರಾಷ್ಟ್ರ ಧ್ವಜಾರೋಹಣ**

**೩. ರಕ್ಷಣಾ ಪಡೆಗಳ ಆಧುನೀಕರಣಕ್ಕೆ ಕೇಂದ್ರ ಸರ್ಕಾರ ಹೆಚ್ಚಿನ ಆದ್ಯತೆ- ರಕ್ಷಣಾ ಸಚಿವ ರಾಜನಾಥ್ ಸಿಂಗ್**

**೪. ಭೂಕಂಪ ಸಂತ್ರಸ್ತ ಕೊಲಂಬಿಯಾಗೆ ೨೦ ಮೆಟ್ರಿಕ್ ಟನ್ ಪರಿಹಾರ ಸಾಮಗ್ರಿ ರವಾನಿಸಿದ ಭಾರತ**

**<>><><*><><<>**

ವಿಶ್ವದ ಹಲವಾರು ಭಾಗಗಳಲ್ಲಿ ಯುದ್ಧ ಮತ್ತು ಅಸ್ಥಿರತೆ ಇದ್ದರೂ ಭಾರತದ ಆರ್ಥಿಕತೆ ವೇಗವಾಗಿ ಬೆಳೆಯುತ್ತಿರುವ ಪ್ರಮುಖ ಆರ್ಥಿಕತೆಯಾಗಿ ಮುಂದುವರಿಯುತ್ತಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ. ೮೦ ನೇ ಸ್ವಾತಂತ್ರ್ಯ ದಿನಾಚರಣೆಯ ಮುನ್ನಾದಿನದಂದು ರಾಷ್ಟ್ರವನ್ನುದ್ದೇಶಿಸಿ ಮಾತನಾಡಿದ ಅವರು, ಆರ್ಥಿಕ ಮುನ್ಸೂಚನೆಗಳ ಪ್ರಕಾರ, ಭಾರತದ ಆರ್ಥಿಕತೆಯ ಬೆಳವಣಿಗೆಯ ದರವು ಸರಾಸರಿ ಜಾಗತಿಕ ಬೆಳವಣಿಗೆಯ ದರಕ್ಕಿಂತ ಎರಡು ಪಟ್ಟು ಹೆಚ್ಚಾಗುವ ನಿರೀಕ್ಷೆಯಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. 'ಆತ್ಮನಿರ್ಭರ ಭಾರತ' ಅಭಿಯಾನ ದೇಶದ ಆರ್ಥಿಕ ಪ್ರಗತಿ ಮತ್ತು ರಾಷ್ಟ್ರೀಯ ಭದ್ರತೆಯ ಅಡಿಪಾಯವನ್ನು ಮತ್ತಷ್ಟು ಬಲಪಡಿಸಿದೆ. ಭಾರತವು ೨೦೩೦ ರ ಸುಸ್ಥಿರ ಅಭಿವೃದ್ಧಿ ಗುರಿಗಳಲ್ಲಿ ಕೆಲವನ್ನು ನಿಗದಿತ ಸಮಯಕ್ಕಿಂತ ಮೊದಲೇ ಸಾಧಿಸಿದೆ ಎಂದು ಅವರು ತಿಳಿಸಿದರು. ರಾಷ್ಟ್ರೀಯ ಹಿತಾಸಕ್ತಿಯು ಭಾರತದ ವಿದೇಶಾಂಗ ನೀತಿಯ ಅಡಿಪಾಯವಾಗಿದ್ದು, ಶಾಂತಿ, ಸಹಕಾರ, ಸಂವಾದ ಮತ್ತು ವಸುಧೈವ

ಕುಟುಂಬಕಂನ ಆದರ್ಶವು ಅದರ ವಿದೇಶಾಂಗ ನೀತಿಯ ಆಧಾರಸ್ತಂಭಗಳಾಗಿವೆ ಎಂದರು. ಆರ್ಥಿಕ ಸಹಕಾರವನ್ನು ಹೆಚ್ಚಿಸಲು ಮತ್ತು ಪರಸ್ಪರ ಸಂಬಂಧಗಳನ್ನು ಬಲಪಡಿಸಲು ಭಾರತ, ಅನೇಕ ದೇಶಗಳೊಂದಿಗೆ ಮುಕ್ತ ವ್ಯಾಪಾರ ಒಪ್ಪಂದಗಳನ್ನು ಮಾಡಿಕೊಂಡಿದೆ. ಜಾಗತಿಕ ದಕ್ಷಿಣದ ದೇಶಗಳಲ್ಲಿ ಭಾರತವು ಪ್ರಮುಖ ಪಾತ್ರ ವಹಿಸುತ್ತಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದರು.

**<>><><*><><<>**

ದೇಶ ನಾಳೆ ೭೯ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಸಂಭ್ರಮದಿಂದ ಆಚರಿಸಲಿದೆ. ನವದೆಹಲಿಯ ಐತಿಹಾಸಿಕ ಕೆಂಪುಕೋಟೆಯಲ್ಲಿ ನಡೆಯಲಿರುವ ಸಮಾರಂಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ರಾಷ್ಟ್ರ ಧ್ವಜಾರೋಹಣ ನೆರವೇರಿಸಲಿದ್ದಾರೆ.  ಭಾರತೀಯ ವಾಯುಪಡೆಯ ಎರಡು ಎಂಐ-೧೭ ಹೆಲಿಕಾಪ್ಟರ್‌ಗಳು ಪುಷ್ಪವೃಷ್ಟಿ ನೆರವೇರಿಸಲಿದ್ದು, ರಾಷ್ಟ್ರ ಧ್ವಜಾರೋಹಣದೊಂದಿಗೆ ೨೧ ಕುಶಲತೋಪುಗಳ ಗೌರವ ವಂದನೆ ನಡೆಯಲಿದೆ. ಬಳಿಕ ಪ್ರಧಾನಿ ದೇಶವನ್ನುದ್ದೇಶಿಸಿ ಭಾಷಣ ಮಾಡಲಿದ್ದಾರೆ.  ರಾಷ್ಟ್ರೀಯ ಗೀತೆ ವಂದೇ ಮಾತರಂನ ೧೫೦ ವರ್ಷಗಳ ಪರಂಪರೆಯನ್ನು ಸ್ಮರಿಸುವುದು ಹಾಗೂ ೨೦೪೭ರ ವಿಕಸಿತ ಭಾರತದ ಪಯಣದಲ್ಲಿ ಯುವಶಕ್ತಿಯ ಕೊಡುಗೆಯನ್ನು ಬಿಂಬಿಸುವುದು ಈ ಬಾರಿಯ ಆಚರಣೆಯ ವಿಶೇಷತೆಯಾಗಿದೆ. ಇದೇ ಮೊದಲ ಬಾರಿಗೆ ಕೆಂಪುಕೋಟೆಯ ಸ್ವಾತಂತ್ರ್ಯ ದಿನಾಚರಣೆಯಲ್ಲಿ ವಂದೇ ಮಾತರಂ ಗಾಯನ ನಡೆಯಲಿದೆ.  ರಾಷ್ಟ್ರೀಯ ಕೆಡೆಟ್ ಕೋರ್-ಎನ್‌ಸಿಸಿ ಹಾಗೂ ಮೈ ಭಾರತ್ ಸ್ವಯಂಸೇವಕರು ವಂದೇ ಮಾತರಂ ಗೀತೆ ಹಾಡಲಿದ್ದಾರೆ. ಸೇನೆ, ನೌಕಾಪಡೆ ಮತ್ತು ವಾಯುಪಡೆಯ ೨ ಸಾವಿರದ ೫೦೦ ಬಾಲಕ ಮತ್ತು ಬಾಲಕಿಯರ ಕೆಡೆಟ್‌ಗಳು ಹಾಗೂ ಮೈ ಭಾರತ್ ಸ್ವಯಂಸೇವಕರು ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ವಿಶ್ವಕರ್ಮ ಯೋಜನೆಯ ಕುಶಲಕರ್ಮಿಗಳು, ಮುದ್ರಾ ಯೋಜನೆಯ ಮಹಿಳಾ ಉದ್ಯಮಿಗಳು, ಪಿಎಂ ಸ್ವನಿಧಿ ಯೋಜನೆಯ ಬೀದಿಬದಿ ವ್ಯಾಪಾರಿಗಳು ಹಾಗೂ ಭಾರತ್ ಟ್ಯಾಕ್ಸಿಯ ಚಾಲಕರು ಸೇರಿದಂತೆ ವಿವಿಧ ಕ್ಷೇತ್ರಗಳ ಸುಮಾರು ೫ ಸಾವಿರ ವಿಶೇಷ ಅತಿಥಿಗಳನ್ನು ಆಹ್ವಾನಿಸಲಾಗಿದೆ.

**<>><><*><><<>**

೭೯ನೇ ಸ್ವಾತಂತ್ರ್ಯ ದಿನಾಚರಣೆಯ ಹಿನ್ನೆಲೆಯಲ್ಲಿ ಆಕಾಶವಾಣಿ ಬೆಂಗಳೂರು ಕೇಂದ್ರದ ಮುಖ್ಯ ವಾಹಿನಿಯಿಂದ ನಾಳೆ ಬೆಳಗ್ಗೆ ೧೦ ಗಂಟೆ ೩೦ ನಿಮಿಷದಿಂದ ೧೧ ಗಂಟೆ ೩೦ ನಿಮಿಷದವರೆಗೆ

’ಫ್ರೀಡಂ ರಿದಮ್ ಎ ಸಿಂಫೊನಿ ಆಫ್ ಫ್ರೀಡಂ’ ಎಂಬ ಸಂಗೀತ ಕಾರ್ಯಕ್ರಮ ನೇರ ಪ್ರಸಾರವಾಗಲಿದೆ.

**<>><><*><><<>**

ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಕೇಂದ್ರ ಸರ್ಕಾರ, ರಕ್ಷಣಾ ಪಡೆಗಳ ಆಧುನೀಕರಣಕ್ಕೆ ಹೆಚ್ಚಿನ ಆದ್ಯತೆ ನೀಡುತ್ತಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ೮೦ನೇ ಸ್ವಾತಂತ್ರ್ಯ ದಿನಾಚರಣೆಯ ಮುನ್ನಾದಿನದಂದು ಆಕಾಶವಾಣಿಯ ಮೂಲಕ ಸೈನಿಕರನ್ನು ಉದ್ದೇಶಿಸಿ ಮಾತನಾಡಿದ ಅವರು, ಆತ್ಮನಿರ್ಭರ ಭಾರತ ಮತ್ತು ಮೇಕ್-ಇನ್-ಇಂಡಿಯಾದಂತಹ ಉಪಕ್ರಮಗಳಿಂದಾಗಿ ಕಳೆದ ೧೨ ವರ್ಷಗಳಲ್ಲಿ ರಕ್ಷಣಾ ವಲಯದಲ್ಲಿ ಕಂಡುಬಂದಿರುವ ಪರಿವರ್ತನಾತ್ಮಕ ಬದಲಾವಣೆಯನ್ನು ಪ್ರಸ್ತಾಪಿಸಿದರು. ೨೦೧೪ ರಲ್ಲಿ ಕೇವಲ ೪೬ ಸಾವಿರ ಕೋಟಿ ರೂಪಾಯಿಗಳಷ್ಟಿದ್ದ ದೇಶೀಯ ರಕ್ಷಣಾ ಉತ್ಪಾದನೆಯು ೨೦೨೫-೨೬ ರ ಹಣಕಾಸು ವರ್ಷದಲ್ಲಿ ದಾಖಲೆಯ ೧.೭೮ ಲಕ್ಷ ಕೋಟಿ ರೂಪಾಯಿಗಳಿಗೆ ಏರಿಕೆಯಾಗಿದೆ. ಇದು ಕಳೆದ ದಶಕದಲ್ಲಿ ಸುಮಾರು ನಾಲ್ಕು ಪಟ್ಟು ಹೆಚ್ಚಾಗಿದೆ. ಈ ಸಾಧನೆಯು ರಕ್ಷಣಾ ವಲಯದಲ್ಲಿ ಆಗಿರುವ ರಚನಾತ್ಮಕ ಬದಲಾವಣೆಗಳಿಗೆ ಸಾಕ್ಷಿಯಾಗಿದೆ ಎಂದು ಹೇಳಿದರು. ರಕ್ಷಣಾ ಸಾರ್ವಜನಿಕ ವಲಯದ ಉದ್ಯಮಗಳು ಮತ್ತು ಇತರ ಸಾರ್ವಜನಿಕ ವಲಯದ ಸಂಸ್ಥೆಗಳು ಒಟ್ಟು ರಕ್ಷಣಾ ಉತ್ಪಾದನೆಯಲ್ಲಿ ಸರಿಸುಮಾರು ಶೇಕಡ ೭೬ ರಷ್ಟನ್ನು ಹೊಂದಿದ್ದು, ಖಾಸಗಿ ವಲಯವು ಶೇಕಡ ೨೪ ರಷ್ಟನ್ನು ಕೊಡುಗೆ ನೀಡುತ್ತಿದೆ. ಇದು ಹಿಂದಿನ ಹಣಕಾಸು ವರ್ಷದಲ್ಲಿ ಶೇಕಡ ೨೨ ರಷ್ಟಿತ್ತು ಎಂದು ಸಚಿವ ರಾಜನಾಥ್ ಸಿಂಗ್ ತಿಳಿಸಿದರು.

**<>><><*><><<>**

ದೇಶ ಇಂದು ಅನುಭವಿಸುತ್ತಿರುವ ಸ್ವಾತಂತ್ರ್ಯವು ಹಿಂದಿನ ತಲೆಮಾರುಗಳ ಮಹಾನ್ ತ್ಯಾಗಗಳ ಮೂಲಕ ಬಂದಿದೆ ಎಂದು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಹೇಳಿದ್ದಾರೆ. ನವದೆಹಲಿಯಲ್ಲಿ ಇಂದು ನಡೆದ ದೇಶ ವಿಭಜನೆಯ ಕರಾಳ ನೆನಪಿನ ದಿನದಂದು ನಡೆದ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು, ರಾಷ್ಟ್ರದ ಸಮಗ್ರತೆ ಕಾಪಾಡಿಕೊಳ್ಳುವುದು ಮತ್ತು ಸಂರಕ್ಷಿಸುವುದು ಪ್ರತಿಯೊಬ್ಬ ನಾಗರಿಕನ ಪ್ರಮುಖ ಕರ್ತವ್ಯವಾಗಿದೆ. ಆ ತ್ಯಾಗಗಳ ಮೂಲಕ ಸಾಧಿಸಿದ ಸ್ವಾತಂತ್ರ್ಯವನ್ನು ಗೌರವಿಸಬೇಕು. ವಿಭಜನೆಯ ಸಮಯದಲ್ಲಿ ಕಂಡುಬಂದ ಭಯಾನಕ ಘಟನೆಗಳು ದೇಶದಲ್ಲಿ ಮತ್ತೆಂದೂ ಸಂಭವಿಸಬಾರದು ಎಂದರು. ಯಾವುದೇ ಜಾತಿ, ಧರ್ಮ

ಅಥವಾ ಪ್ರದೇಶವು ರಾಷ್ಟ್ರಕ್ಕಿಂತ ಮುಖ್ಯವಲ್ಲ ಎಂದು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಹೇಳಿದರು.

<>><><*><><<>

ದೇಶ ವಿಭಜನೆಯ ಸಮಯದಲ್ಲಿ ತಮ್ಮ ಪ್ರಾಣ ತ್ಯಾಗ ಮಾಡಿದ, ತಮ್ಮ ಪ್ರೀತಿಪಾತ್ರರನ್ನು ಕಳೆದುಕೊಂಡ ಮತ್ತು ವಲಸೆ ಹೋಗುವಂತೆ ಒತ್ತಾಯಿಸಲ್ಪಟ್ಟವರನ್ನು ಸ್ಮರಿಸುವ ಸಂದರ್ಭವೇ 'ದೇಶ ವಿಭಜನೆಯ ಕರಾಳ ನೆನಪಿನ ದಿನ' ಎಂದು ಭಾರತೀಯ ಜನತಾ ಪಕ್ಷದ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ಹೇಳಿದ್ದಾರೆ. ಹರಿಯಾಣದ ಗುರುಗ್ರಾಮದಲ್ಲಿ ನಡೆದ ದೇಶ ವಿಭಜನೆಯ ಕರಾಳ ನೆನಪಿನ ದಿನದಂದು ನಡೆದ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು, ೧೯೪೬ ರ ಆಗಸ್ಟ್ ೧೬ ರಂದು ನೇರ ಕ್ರಿಯಾ ದಿನದಂದು ಕಲ್ಕತ್ತಾದ ಬೀದಿಗಳಲ್ಲಿ ಒಂದು ದುಃಖಕರ ಅಧ್ಯಾಯ ತೆರೆದುಕೊಂಡಿತು. ಇದು ಇಡೀ ದೇಶವನ್ನು ಕೋಮು ಹಿಂಸಾಚಾರಕ್ಕೆ ದೂಡಿತು. ಆ ಅವಧಿಯಲ್ಲಿ, ಲಕ್ಷಾಂತರ ಜನರು ಸುರಕ್ಷತೆಗಾಗಿ ಒಂದು ಸ್ಥಳದಿಂದ ಮತ್ತೊಂದು ಸ್ಥಳಕ್ಕೆ ವಲಸೆ ಹೋಗಬೇಕಾಯಿತು. ತಮ್ಮ ಆಸ್ತಿ-ಪಾಸ್ತಿಯನ್ನು ಬಿಟ್ಟು ಹೋಗಬೇಕಾಯಿತು. ೧.೫ ಕೋಟಿಗೂ ಹೆಚ್ಚು ಜನರು ಸ್ಥಳಾಂತರಗೊಂಡರು ಮತ್ತು ಲಕ್ಷಾಂತರ ಜನರು ತಮ್ಮ ಜೀವಗಳನ್ನು ಕಳೆದುಕೊಂಡರು ಎಂದು ಬೇಸರ ವ್ಯಕ್ತಪಡಿಸಿದರು. ರಾವಲ್ಪಿಂಡಿಯಿಂದ ಪಂಜಾಬ್‌ನ ವಿವಿಧ ಪ್ರದೇಶಗಳಿಗೆ ಜನರು ಹಿಂಸಾತ್ಮಕ ಘಟನೆಗಳನ್ನು ಎದುರಿಸಿದರು. ಯುವ ಪೀಳಿಗೆ ವಿಭಜನೆಯ ದುರಂತವನ್ನು ತಿಳಿದಿರಬೇಕು ಎಂದು ನಿತಿನ್ ನಬಿನ್ ಹೇಳಿದರು.

<>><><*><><<>

ಕಳೆದ ವರ್ಷ ಕರೂರ್‌ನಲ್ಲಿ ನಡೆದ ಕಾಲ್ತುಳಿತದಲ್ಲಿ ಮೃತಪಟ್ಟವರ ಕುಟುಂಬ ಸದಸ್ಯರಿಗೆ ಸರ್ಕಾರಿ ಉದ್ಯೋಗ ನೀಡುವ ತಮಿಳುನಾಡು ಸರ್ಕಾರದ ನಿರ್ಧಾರವನ್ನು ರದ್ದುಗೊಳಿಸಿದ್ದ ಮದ್ರಾಸ್ ಹೈಕೋರ್ಟ್ ಆದೇಶಕ್ಕೆ ಸುಪ್ರೀಂ ಕೋರ್ಟ್ ಇಂದು ತಡೆ ನೀಡಿದೆ. ಹೈಕೋರ್ಟ್ ತೀರ್ಪು ಪ್ರಶ್ನಿಸಿ, ತಮಿಳುನಾಡು ಸರ್ಕಾರ ಸಲ್ಲಿಸಿದ್ದ ಅರ್ಜಿಯನ್ನು ವಿಚಾರಣೆ ನಡೆಸಿದ ನ್ಯಾಯಮೂರ್ತಿಗಳಾದ ಜೆ.ಬಿ.ಪಾರ್ದಿವಾಲಾ ಮತ್ತು ಕೆ.ವಿನೋದ್ ಚಂದ್ರನ್ ಅವರಿದ್ದ ನ್ಯಾಯಪೀಠ, ಮಧ್ಯಂತರ ಆದೇಶವನ್ನು ನೀಡಿದೆ. ದುರಂತಕ್ಕೆ ಪ್ರತಿಕ್ರಿಯೆಯಾಗಿ ರಾಜ್ಯ ಸರ್ಕಾರ, ದುಃಖಿತ ಕುಟುಂಬಗಳಿಗೆ ಉದ್ಯೋಗ ನೀಡಿದೆ ಎಂದು ತಮಿಳುನಾಡು ಸರ್ಕಾರ, ಸುಪ್ರೀಂ ಕೋರ್ಟ್ ಗಮನಕ್ಕೆ ತಂದಿದೆ. ೨೦೨೫ ರ ಸೆಪ್ಟೆಂಬರ್ ನಲ್ಲಿ ಕರೂರ್‌ನಲ್ಲಿ ನಡೆದ ಕಾಲ್ತುಳಿತದಲ್ಲಿ ಮೃತಪಟ್ಟವರ ಕುಟುಂಬಗಳಿಗೆ ಅನುಕಂಪದ ನೇಮಕಾತಿಗಳನ್ನು ನೀಡುವ ರಾಜ್ಯ ಸರ್ಕಾರದ ನಿರ್ಧಾರವನ್ನು ರದ್ದುಗೊಳಿಸಿದ್ದ

ಮದ್ರಾಸ್ ಹೈಕೋರ್ಟ್‌ನ ಮಧುರೈ ಪೀಠದ ಆದೇಶದ ವಿರುದ್ಧ ತಮಿಳುನಾಡು ಸರ್ಕಾರ, ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಸಿತ್ತು.

**<>><><*><><<>**

ಭೂಕಂಪದ ನಂತರದ ಪರಿಹಾರ ಮತ್ತು ಪುನರ್ವಸತಿ ಕಾರ್ಯಗಳಿಗೆ ನೆರವಾಗುವ ಉದ್ದೇಶದಿಂದ ಕೊಲಂಬಿಯಾಗೆ ಭಾರತ ೨೦ ಮೆಟ್ರಿಕ್ ಟನ್‌ಗಳ ಪರಿಹಾರ ಸಾಮಗ್ರಿಗಳನ್ನು ರವಾನಿಸಿದೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ನೀಡಿರುವ ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್, ಪರಿಹಾರ ಸಾಮಗ್ರಿಗಳಲ್ಲಿ ಔಷಧಗಳು ಮತ್ತು ವೈದ್ಯಕೀಯ ಉಪಕರಣಗಳು, ತಾತ್ಕಾಲಿಕ ಆಶ್ರಯ ವ್ಯವಸ್ಥೆ ಹಾಗೂ ನೈರ್ಮಲ್ಯಕ್ಕೆ ಅಗತ್ಯವಾದ ಸಾಮಗ್ರಿಗಳು ಸೇರಿದಂತೆ ವಿಪತ್ತಿನ ನಂತರ ಅಗತ್ಯವಿರುವ ಇತರ ವಸ್ತುಗಳು ಒಳಗೊಂಡಿವೆ ಎಂದು ತಿಳಿಸಿದ್ದಾರೆ. ಈ ಕಷ್ಟದ ಸಂದರ್ಭದಲ್ಲಿ ಭಾರತವು ಕೊಲಂಬಿಯಾ ಜನತೆಯೊಂದಿಗೆ ದೃಢವಾಗಿ ನಿಂತಿದೆ ಎಂದು ಅವರು ಹೇಳಿದ್ದಾರೆ.

**<>><><*><><<>**

ಭಾರತದ ಆಟೋಮೊಬೈಲ್ ಕ್ಷೇತ್ರದಲ್ಲಿ ಭವಿಷ್ಯದ ತಂತ್ರಜ್ಞಾನಕ್ಕೆ ತಕ್ಕಂತೆ ನುರಿತ ಮಾನವ ಸಂಪನ್ಮೂಲವನ್ನು ರೂಪಿಸುವ ಆಟೋಮೋಟಿವ್ ಕೌಶಲ್ಯ ಅಭಿವೃದ್ಧಿ ಮಂಡಳಿಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆಯನ್ನು ಕೇಂದ್ರ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಸಚಿವ ಹೆಚ್.ಡಿ.ಕುಮಾರಸ್ವಾಮಿ ವಹಿಸಿದ್ದರು. ಈ ವೇಳೆ ಮಾತನಾಡಿದ ಅವರು, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ 'ವಿಕಸಿತ ಭಾರತ' ಹಾಗೂ 'ಆತ್ಮನಿರ್ಭರ ಭಾರತ'ದ ಪರಿಕಲ್ಪನೆಯಂತೆ ಭಾರತವನ್ನು ಜಾಗತಿಕ ಉತ್ಪಾದನಾ ಕೇಂದ್ರವನ್ನಾಗಿ ಮಾಡಲು ಯುವಜನತೆಗೆ ಉದಯೋನ್ಮುಖ ತಂತ್ರಜ್ಞಾನಗಳಲ್ಲಿ ಕೌಶಲ್ಯ ತರಬೇತಿ ನೀಡುವುದು ಅಗತ್ಯವಾಗಿದೆ ಎಂದು ತಿಳಿಸಿದರು. ಸಭೆಯಲ್ಲಿ ರೋಬೋಟಿಕ್ಸ್, ಆಟೊಮೇಷನ್, ಸ್ಮಾರ್ಟ್ ಮ್ಯಾನುಫ್ಯಾಕ್ಚರಿಂಗ್, ಎಲೆಕ್ಟ್ರಿಕ್ ವಾಹನ ತಂತ್ರಜ್ಞಾನ ಹಾಗೂ ವಾಹನ ಸುರಕ್ಷತೆಯಂತಹ ಭವಿಷ್ಯದ ತಂತ್ರಜ್ಞಾನಗಳಲ್ಲಿ ಕೌಶಲ್ಯ ತರಬೇತಿ ನೀಡುವ ಕುರಿತು ಚರ್ಚಿಸಲಾಯಿತು.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೬.೪೫ ಕ್ಕೆ ><><<>**